ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 02-08-2017

**ಪತ್ರಿಕಾ ಪ್ರಕಟಣೆ**

# ಕಾವೇರಿ ಕಣಿವೆಯಲ್ಲಿ ನೀರಿನ ಸಂಗ್ರಹ ಕುಸಿತ – ಶೀಘ್ರದಲ್ಲಿ ಸರ್ವಪಕ್ಷಗಳ ಸಭೆ – ಎಂ.ಬಿ. ಪಾಟೀಲ್

**ಬೆಂಗಳೂರು, ಆಗಸ್ಟ್ 2 (ಕರ್ನಾಟಕ ವಾರ್ತೆ)**

ಕಾವೇರಿ ಕಣಿವೆಯಲ್ಲಿ ಮುಂಗಾರು ಮಳೆ ಕುಂಠಿತವಾಗಿರುವ ಹಿನ್ನೆಲೆಯಲ್ಲಿ ಕಣಿವೆ ವ್ಯಾಪ್ತಿಯ ನಾಲ್ಕು ಜಲಾಶಯಗಳಲ್ಲಿ ನೀರಿನ ಶೇಖರಣೆ ಪ್ರಮಾಣ ಗಣನೀಯವಾಗಿ ಕುಸಿತಗೊಂಡಿದೆ ಎಂದು ಜಲಸಂಪನ್ಮೂಲ ಸಚಿವ ಎಂ.ಬಿ. ಪಾಟೀಲ್ ಆತಂಕ ವ್ಯಕ್ತಪಡಿಸಿದರು.

ವಿಧಾನಸೌಧದಲ್ಲಿ ಇಂದು ಸುದ್ಧಿಗೋಷ್ಠಿಯಲ್ಲಿ ಮಾತನಾಡಿದ ಅವರು ಜಲಾಶಯಗಳಲ್ಲಿ ಸಂಗ್ರಹವಾಗಿರುವ ನೀರಿನ ಮಾಹಿತಿಯನ್ನು ಬಿಡುಗಡೆ ಮಾಡಿ ಸಧ್ಯದ ಪರಿಸ್ಥಿತಿಯಲ್ಲಿ ಬೆಳೆಗಳಿಗೆ ನೀರು ಬಿಡುಗಡೆ ಮಾಡುವುದು ಕಷ್ಟಸಾಧ್ಯ. ಈ ಬಗ್ಗೆ ಶೀಘ್ರದಲ್ಲಿ ಸರ್ವಪಕ್ಷಗಳ ಮುಖಂಡರು, ನೀರಾವರಿ ತಜ್ಞರು, ರೈತ ಮುಖಂಡರ ಜೊತೆ ಮುಖ್ಯಮಂತ್ರಿ ಅವರ ಅಧ್ಯಕ್ಷತೆಯಲ್ಲಿ ಸಭೆ ಕರೆದು ವಿವರ ನೀಡುವುದಾಗಿ ಸಚಿವರು ತಿಳಿಸಿದರು.

ರೈತರು ಬೆಳೆಗಳಿಗೆ ನೀರು ಬಿಡಗಡೆ ಮಾಡಬೇಕು ಎಂದು ಒತ್ತಾಯಿಸುತ್ತಿದ್ದಾರೆ. ಕನಿಷ್ಠ ಕೆರೆಗಳಿಗೆ ನೀರು ತುಂಬಿಸುವ ಬಗ್ಗೆಯೂ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆಯುವ ಸಭೆಯಲ್ಲಿ ನಿರ್ಧಾರ ಕೈಗೊಳ್ಳಲಾಗುವುದು ಎಂದು ಸಚಿವರು ತಿಳಿಸಿದರು.

ಬೆಳೆಗಳಿಗೆ ಮತ್ತು ಕುಡಿಯುವ ನೀರಿಗೆ ಸುಮಾರು 131 ಟಿ.ಎಂ.ಸಿ. ನೀರು ಅಗತ್ಯ ಇದೆ. ನಮ್ಮಲ್ಲಿ ಈಗಿರುವ ದಾಸ್ತಾನು 43.30 ಟಿ.ಎಂ.ಸಿ. ನೀರಿದೆ. ಬೆಂಗಳೂರು ನಗರ ಸೇರಿದಂತೆ ಈ ಬಾಗದ ಜನರಿಗೆ ಕುಡಿಯುವ ನೀರು ಒದಗಿಸಲು ಕನಿಷ್ಠ 34 ಟಿ.ಎಂ.ಸಿ. ನೀರಿನ ಅಗತ್ಯತೆ ಇದೆ. ಎಲ್ಲಾ ಸಾಧಕ-ಬಾಧಕ ಕುರಿತಂತೆ ಎಲ್ಲಾ ಮುಖಂಡರೊಂದಿಗೆ ಚರ್ಚಿಸಿ ಅವರಿಗೆ ಮನವರಿಕೆ ಮಾಡಿಕೊಡಲಾಗುವುದು ಎಂದು ಸಚಿವರು ತಿಳಿಸಿದರು.

ತಮಿಳುನಾಡಿಗೆ ಕಳೆದ ಎರಡು ತಿಂಗಳಿಂದ ಕೇವಲ 7 ಟಿ.ಎಂ.ಸಿ. ನೀರನ್ನು ಬಿಡುಗಡೆ ಮಾಡಲಾಗಿದೆ. ಎಲ್ಲಾ ಪಕ್ಷಗಳ ಮುಖಂಡರು ನೀಡುವ ಸಲಹೆಗಳನ್ನು ಆಧರಿಸಿ ರೈತನಾಯಕರಿಗೆ ವಿವರಿಸಿ ಮುಂದಿನ ತೀರ್ಮಾನ ಕೈಗೊಳ್ಳಲಾಗುವುದು ಎಂದು ಜಲಸಂಪನ್ಮೂಲ ಸಚಿವ ಎಂ.ಬಿ. ಪಾಟೀಲ್ ತಿಳಿಸಿದರು.

:ಜೆಡಿ:ಜಿಪಿಆರ್.

# ಡಿಪ್ಲೋಮ ಕೋರ್ಸ್‌ಗಳಿಗೆ ಅರ್ಜಿ ಆಹ್ವಾನ

**ಬೆಂಗಳೂರು, ಆಗಸ್ಟ್ 2 (ಕರ್ನಾಟಕ ವಾರ್ತೆ)**

ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ ಎಸ್.ಎಸ್.ಎಲ್.ಸಿ. ಪಾಸಾದ ವಿದ್ಯಾರ್ಥಿಗಳಿಂದ ಡಿಪ್ಲೋಮ ಕೋರ್ಸ್‌ಗಳಿಗಾಗಿ ಅರ್ಜಿ ಆಹ್ವಾನಿಸಿದೆ.

ಬೆಂಗಳೂರು ನಗರದ ರಾಜಾಜಿನಗರ ಇಂಡಸ್ಟ್ರೀಯಲ್ ಎಸ್ಟೇಟ್‌ನಲ್ಲಿರುವ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (ಜಿಟಿಟಿಸಿ) ಸಂಸ್ಥೆಯಲ್ಲಿ ಡಿಪ್ಲೋಮ ಇನ್ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ಇಂಜಿನಿಯರಿಂಗ್–ಜಿಟಿಟಿಸಿ, ಕೈಗಾರಿಕಾ ಪ್ರದೇಶ, ರಾಜಾಜಿನಗರ, ಬೆಂಗಳೂರು ಹಾಗೂ ಡಿಪ್ಲೋಮ ಇನ್ ಟೂಲ್ ಮತ್ತು ಡೈ ಮೇಕಿಂಗ್, ಡಿಪ್ಲೋಮ ಇನ್ ಮೆಕಟ್ರಾನಿಕ್ಸ್, ಕೆಐಎಡಿಬಿ ಇಂಡಸ್ಟ್ರೀಯಲ್ ಏರಿಯಾ, ಹಿಂದೂಪುರ ರೋಡ್, ಕುಡುಮಲಕುಂಟೆ, ಗೌರಿಬಿದನೂರು ಕೋರ್ಸ್‌ಗಳ ಪ್ರವೇಶಕ್ಕೆ ಉಳಿಕೆ ಸೀಟುಗಳಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಉಚಿತವಾಗಿ (ಬೋಧನ ಶುಲ್ಕವಿಲ್ಲದೆ) ಪ್ರವೇಶ ಪಡೆಯಬಹುದಾಗಿದೆ.

ಆಸಕ್ತ ವಿದ್ಯಾರ್ಥಿಗಳು ದಿನಾಂಕ 11–08–2017 ರ ಒಳಗಡೆ ಅರ್ಜಿ ಸ್ವೀಕರಿಸಿ ಪ್ರವೇಶ ಪಡೆದುಕೊಳ್ಳಬಹುದಾಗಿದೆ. ಮೊಬೈಲ್ ಸಂಖ್ಯೆ 9844312400/9141629566ನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಜೆಡಿ:ಜಿಪಿಆರ್.

# ಭೇಟಿ ಬಚಾವೋ ಭೇಟಿ ಪಡಾವೋ ಯೋಜನೆ ಹೆಸರಿನಲ್ಲಿ ವಂಚನೆ

**ಬೆಂಗಳೂರು, ಆಗಸ್ಟ್ 2 (ಕರ್ನಾಟಕ ವಾರ್ತೆ)**

ಭೇಟಿ ಬಚಾವೋ ಭೇಟಿ ಪಡಾವೋ ಕಾರ್ಯಕ್ರಮದಡಿಯಲ್ಲಿ ರೂ. 2.00 ಲಕ್ಷ ನಗದು ನೀಡುವುದಾಗಿ ಕೆಲವು ಅನಧಿಕೃತ ಸಂಘಟನೆಗಳು/ಸ್ವಯಂ ಸೇವಾ ಸಂಸ್ಥೆಗಳು/ವ್ಯಕ್ತಿಗಳು ಹೆಣ್ಣು ಮಕ್ಕಳ ವೈಯಕ್ತಿಕ ಮಾಹಿತಿಯನ್ನು ಪಡೆದು ವಂಚಿಸುತ್ತಿರುವುದು ಭಾರತ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಚಿವಾಲಯದ ಗಮನಕ್ಕೆ ಬಂದಿದ್ದು ಇಂತಹವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದೆ.

ಈ ಕುರಿತು ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ರಾಜ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಪತ್ರವನ್ನು ಬರೆದಿದ್ದು ಮುಗ್ಧ ಹೆಣ್ಣು ಮಕ್ಕಳನ್ನು ಸುಳ್ಳು ಭರವಸೆ ನೀಡಿ ಮೋಸಮಾಡುವುದು ಕಾನೂನು ಬಾಹಿರವಾಗಿರುತ್ತದೆ. ಭೇಟಿ ಬಚಾವೋ ಭೇಟಿ ಪಡಾವೋ ಕಾರ್ಯಕ್ರಮದಲ್ಲಿ ಇಂತಹ ಯಾವುದೇ ನಗದು ನೀಡುವ ಕಾರ್ಯಕ್ರಮ ಇರುವುದಿಲ್ಲ. ವಂಚಕರ ವಿರುದ್ಧ ಕ್ರಮತೆಗೆದುಕೊಳ್ಳಲು ಸೂಚಿಸಲಾಗಿದೆ.

**ಸಾರ್ವಜನಿಕರ ಗಮನಕ್ಕೆ:**

ಇಂತಹ ವಂಚಕರ ಬಲೆಗೆ ಬೀಳದಂತೆ ಸಾರ್ವಜನಿಕರಿಗೆ ಸಲಹೆ/ಸೂಚನೆ ನೀಡಲಾಗಿದೆ. ಈ ಯೋಜನೆಯಡಿ ವಂಚಕರು ನಮೂನೆಯಲ್ಲಿ ಕೋರುವ ಯಾವುದೇ ವೈಯಕ್ತಿಕ ವಿವರಗಳನ್ನು ಅಂದರೆ ಆಧಾರ್ ಕಾರ್ಡ್, ಬ್ಯಾಂಕ್ ವಿವರಗಳು, ದೂರವಾಣಿ/ಮೊಬೈಲ್ ಸಮಖ್ಯೆ/ಇ-ಮೇಲ್ ಐ.ಡಿ/ಇತರೆ ಯಾವುದೇ ಮಾಹಿತಿಗಳನ್ನು ಬಹಿರಂಗಪಡಿಸಬಾರದು.

ಇಂತಹ ವಂಚನೆಗಳನ್ನು ಮಾಡುವವರ ಬಗ್ಗೆ ವ್ಯಕ್ತಿಗಳ/ಸಂಸ್ಥೆಗಳ ಹೆಸರನ್ನು ಸ್ಥಳೀಯ ಪೊಲೀಸ್ ಠಾಣೆಗೆ ತಿಳಿಸಬೇಕು.

ನಿಮ್ಮ ಸ್ನೇಹಿತರು, ಸಂಬಂಧಿಕರು ಹಾಗೂ ನಿಮ್ಮನ್ನು ಸಂಪರ್ಕಿಸುವ ಎಲ್ಲರಿಗೂ ಇಂತಹ ವಂಚಕರ ವಿರುದ್ಧ ಜಾಗರೂಕರಾಗಿರುವಂತೆ ತಿಳಿಸಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಪ್ರಕಟಣೆ ತಿಳಿಸಿದೆ.

ಜೆಡಿ:ಜಿಪಿಆರ್.

# ಮಾವು ಬೆಳೆ ಪುನ:ಶ್ಚೇತನ ಕುರಿತು ತರಬೇತಿ

**ಬೆಂಗಳೂರು, ಆಗಸ್ಟ್ 2 (ಕರ್ನಾಟಕ ವಾರ್ತೆ)**

ರಾಜ್ಯದಲ್ಲಿ ಪ್ರಸುತ್ತ ಮಾವು ಬೆಳೆ ಗಣನೀಯವಾಗಿ ಕುಂಠಿತವಾಗಿರುವುದು ಸಮೀಕ್ಷೆಯಿಂದ ತಿಳಿದು ಬಂದಿದ್ದು ಅನುತ್ಪಾದಕ ಮರಗಳ ಇಳುವರಿ, ಗುಣಮಟ್ಟ ಮತ್ತು ಉತ್ಪಾದಕತೆಯನ್ನು ಹೆಚ್ಚಿಸಲು ಪುನ:ಶ್ಚೇತನ ಮತ್ತು ಟಾಪ್ ವರ್ಕಿಂಗ್ ಚಟುವಟಿಕೆಗಳನ್ನು ಅಳವಡಿಸಿಕೊಳ್ಳುವ ಕುರಿತು ತರಬೇತಿ ಕಾರ್ಯಕ್ರಮಗಳನ್ನು ಜಿಲ್ಲಾ ಮಟ್ಟದಲ್ಲಿ ಹಮ್ಮಿಕೊಳ್ಳಲಾಗುವುದು ಎಂದು ಕರ್ನಾಟಕ ರಾಜ್ಯ ಮಾವು ಅಭಿವೃದ್ಧಿ ಮತ್ತು ಮಾರುಕಟ್ಟೆ ನಿಗಮ ಅಧ್ಯಕ್ಷ ಎಲ್ ಗೋಪಾಲಕೃಷ್ಣ ತಿಳಿಸಿದರು.

ಇಂದು ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ರಾಜ್ಯದ ಆಯ್ದ 13 ಜಿಲ್ಲೆಗಳಲ್ಲಿ ವಿವಿಧ ದಿನಾಂಕಗಳಂದು ತರಬೇತಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲು ಯೋಜಿಸಿದ್ದು, ಆಗಸ್ಟ್ 5 ರಿಂದ 23 ರವರೆಗೆ ನಡೆಯಲಿದೆ ಎಂದು ಅವರು ತಿಳಿಸಿದರು.

ಆಗಸ್ಟ್ 5 ರಂದು ಕೊಪ್ಪಳ ಜಿಲ್ಲೆ, ಆಗಸ್ಟ್ 7 ರಂದು ರಾಮನಗರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆ, ಆಗಸ್ಟ್ 8 ರಂದು ಕೋಲಾರ ಜಿಲ್ಲೆಯ (ಶ್ರೀನಿವಾಸಪುರ), ಆಗಸ್ಟ್ 9 ರಂದು ಮುಳಬಾಗಿಲು (ತಾಯಲೂರು), ಆಗಸ್ಟ್ 10 ರಂದು ಹಾವೇರಿ, ಆಗಸ್ಟ್ 11 ಬೆಳಗಾವಿಯಲ್ಲಿ, ಆಗಸ್ಟ್ 17 ರಂದು ಧಾರವಾಡ, ಆಗಸ್ಟ್ 18 ಚಾಮರಾಜನಗರ, ಆಗಸ್ಟ್ 19 ರಂದು ಮೈಸೂರು, ಆಗಸ್ಟ್ 22 ರಂದು ಹಾಸನ ಹಾಗೂ 23 ರಂದು ತುಮಕೂರು ಜಿಲ್ಲೆಗಳಲ್ಲಿ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಜೆಡಿ:ಜಿಪಿಆರ್.

# ವರಮಹಾಲಕ್ಷ್ಮೀ ಹಬ್ಬದ ಪ್ರಯುಕ್ತ ವಿಶೇಷ ರಿಯಾಯಿತಿ

**ಬೆಂಗಳೂರು, ಆಗಸ್ಟ್ 2 (ಕರ್ನಾಟಕ ವಾರ್ತೆ)**

ವರಮಹಾಲಕ್ಷ್ಮೀ ಹಬ್ಬದ ಪ್ರಯುಕ್ತ ಹಾಪ್‌ಕಾಮ್ಸ್ ಮಳಿಗೆಗಳಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ವಿಶೇಷ ರಿಯಾಯಿತಿಯನ್ನು ನೀಡಲಾಗಿದ್ದು, ಸಾರ್ವಜನಿಕರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ಹಾಪ್‌ಕಾಮ್ಸ್ ವ್ಯವಸ್ಥಾಪಕ ನಿರ್ದೇಶಕ ಡಾ. ಬೆಳ್ಳೂರು ಕೃಷ್ಣ ಅವರು ತಿಳಿಸಿದರು.

ಇಂದು ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಹಾಪ್‌ಕಾಮ್ಸ್ ಗ್ರಾಹಕರಿಗೆ ಅನುಕೂಲವಾಗುವಂತೆ ಹಬ್ಬಗಳಲ್ಲಿ ವಿಶೇಷ ರಿಯಾಯಿತಿಯನ್ನು ನೀಡುತ್ತದೆ ಮತ್ತು ಇದು ರೈತ ಸಂಸ್ಥೆಯಾಗಿದೆ. ವರಮಹಾಲಕ್ಷ್ಮೀ ಹಬ್ಬದ ಪ್ರಯುಕ್ತ ವಿಶೇಷ ಹಣ್ಣುಗಳಾದ ಬೇಲದ ಹಣ್ಣು, ಬೆಂಗಳೂರು ನೀಲಿ ದ್ರಾಕ್ಷಿ, ಅನಾನಸ್, ಸೀತಾಫಲ, ಸೀಬೆ, ಸೇಬು, ಮೂಸಂಬಿ, ಕಿತ್ತಳೆ, ತೆಂಗಿನಕಾಯಿ ಹಾಗೂ ಬಾಳೇಹಣ್ಣು ಸೇರಿದಂತೆ ಇತ್ಯಾದಿ ಹಣ್ಣುಗಳನ್ನು ಮಾರಾಟ ಮಾಡಲು ವ್ಯವಸ್ಥೆ ಕಲ್ಪಿಸಲಾಗಿದೆ.

ನಾಳೆಯಿಂದ ಆಯ್ದ ಹಣ್ಣುಗಳ ಮೇಲೆ ಶೇಕಡಾ 5 ರಷ್ಟು ರಿಯಾಯಿತಿಯನ್ನು ಸಹ ನೀಡಲಾಗುವುದು ಎಂದು ಅವರು ಹೇಳಿದರು.

ಜೆಡಿ:ಜಿಪಿಆರ್.

# ಲಾಲ್‌ಬಾಗ್‌ನಲ್ಲಿ ಆಗಸ್ಟ್ 4 ರಿಂದ 15 ವರಗೆ ಸ್ವಾತಂತ್ರೋತ್ಸವ ಫಲಪುಷ್ಪ ಪ್ರದರ್ಶನ

**ಬೆಂಗಳೂರು, ಆಗಸ್ಟ್ 2 (ಕರ್ನಾಟಕ ವಾರ್ತೆ)**

ಲಾಲ್‌ಬಾಗ್‌ನಲ್ಲಿ ಈ ಸಾಲಿನ ಸ್ವಾತಂತ್ರೋತ್ಸವ ಫಲಪುಷ್ಪ ಪ್ರದರ್ಶನವನ್ನು ಆಗಸ್ಟ್ 4 ರಿಂದ 15 ರವರೆಗೆ ಹಮ್ಮಿಕೊಳ್ಳಲಾಗಿದೆ ಎಂದು ತೋಟಗಾರಿಕಾ ಇಲಾಖೆಯ ನಿರ್ದೇಶಕ ಪ್ರಭಾಷ್ ಚಂದ್ರ ರೇ ಅವರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಇಂದು ಅವರು ಮಾತನಾಡಿ ಪ್ರತಿ ವರ್ಷದಂತೆ ಈ ವರ್ಷ ಸಹ ಸ್ವಾತಂತ್ರೋತ್ಸವ ಪ್ರಯುಕ್ತ ಲಾಲ್‌ಬಾಗ್‌ನಲ್ಲಿ ಫಲಪುಷ್ಪ ಪ್ರದರ್ಶನವನ್ನು ಹಮ್ಮಿಕೊಳ್ಳಲಾಗಿದೆ. ಈ ವರ್ಷ 206 ನೇ ಫಲಪುಷ್ಪ ಪ್ರದರ್ಶನವಾಗಿದ್ದು, ಆಗಸ್ಟ್ 4 ರಂದು ರಾಜ್ಯಪಾಲರಾದ ವಜುಭಾಯಿ ವಾಲಾ ಅವರು ಗಾಜಿನ ಮನೆಯಲ್ಲಿ ಉದ್ಘಾಟಿಸಲಿದ್ದಾರೆ ಎಂದು ಅವರು ತಿಳಿಸಿದರು.

ಈ ಸಾಲಿನ ಫಲಪುಷ್ಪ ಪ್ರದರ್ಶನದ ವಿಶೇಷತೆ ರಾಷ್ಟ್ರಕವಿ ಕುವೆಂಪು ಅವರಿಗೆ ಸಂಬಂಧಿಸಿದಾಗಿದ್ದು, ಕುವೆಂಪು ಸಾಹಿತ್ಯ, ಜೀವನ ಕುರಿತು ಮಕ್ಕಳಿಗೆ ವಿಶೇಷ ಪ್ರಬಂಧ ಸ್ಪರ್ಧೆಯನ್ನು ಆಗಸ್ಟ್ 8 ರಂದು ಹಮ್ಮಿಕೊಳ್ಳಲಾಗಿದೆ.

ಆಗಸ್ಟ್ 5 ರಂದು ಪುಷ್ಪಭಾರತಿ, ತರಕಾರಿ ಕೆತ್ತನೆ, ಬೋನ್ಸಾಯ್, ಡಚ್ ಹೂವಿನ ಜೋಡಣೆ, ಜಾನೂರು ಒಣ ಹೂವಿನ ಜೋಡಣೆಯ ಕಲೆಗಳ ಸ್ಪರ್ಧೆ ಹಾಗೂ ಪ್ರದರ್ಶನಗಳನ್ನು ಹಮ್ಮಿಕೊಳ್ಳಲಾಗಿದ್ದು, ಸಾಹಿತಿ ಶ್ರೀಮತಿ ಕಮಲಾ ಹಂಪನಾ ಅವರು ಈ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಈ ಬಾರಿಯ ಫಲಪುಷ್ಪ ಪ್ರದರ್ಶನ ಅನೇಕ ವಿಶೇಷತೆಗಳು ಮತ್ತು ಹೊಸತನಗಳಿಂದ ಕೂಡಿದ್ದು 3 ರಿಂದ 4 ಲಕ್ಷ ವೀಕ್ಷಕರು ಆಗಮಿಸುವ ನಿರೀಕ್ಷೆಯಿದೆ ಎಂದು ಹೇಳಿದರು.

ಜೆಡಿ:ಜಿಪಿಆರ್.